## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2022-23ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ **"ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ"**ಯ ಮಾರ್ಗಸೂಚಿಗಳನ್ನು ರೂಪಿಸುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 212 ಬಿಎಂಎಸ್ 2021, ದಿನಾಂಕ:27.06.2022.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ:ಕಮಸಅನಿನಿ/ಸಿಆರ್-40/2022-23, ದಿನಾಂಕ:25.05.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಲ್ಲಿ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದಿಂದ 2022-23ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ **"ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ"** ಯ ಕ್ರಿಯಾಯೋಜನೆಗೆ ಅನುಮತಿ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ನಿಗಮದ 2ನೇ ನಿರ್ದೇಶಕ ಮಂಡಳಿಯ ಸಭೆಯ ಕಾರ್ಯಸೂಚಿಯಲ್ಲಿ ಪ್ರಸ್ತಾಪಿಸಲಾದ ಹೊಸ ಯೋಜನೆಯಾದ **"ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ"** ಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಈ ಯೋಜನೆಯ ಮಾರ್ಗಸೂಚಿಗೆ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 212 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ:19-11-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮವು 2022-23ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ **"ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆಯ"**ನ್ನು ಈ ಕೆಳಕಂಡ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

**ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆಯ ಮಾರ್ಗಸೂಚಿಗಳು**

1. **ಯೋಜನೆ ಉದ್ದೇಶ**:-

ಹಿಂದುಳಿದ ವರ್ಗಗಳ ಪ್ರವರ್ಗ 3-ಬಿ ಅಡಿಯಲ್ಲಿ 2(ಎ) ರಿಂದ 2 (ಎಫ್) ವರೆಗೆ ಬರುವ ಜನರು ಆರ್ಥಿಕವಾಗಿ ಸಧೃಡಗೊಳ್ಳಲು ಹೋಟೆಲ್ ಉದ್ದಿಮೆ ಕೈಗೊಳ್ಳಲು ಆರ್ಥಿಕ ನೆರವಿಗಾಗಿ ಸಾಲ ಮತ್ತು ಸಹಾಯಧನದ ನೆರವು ನೀಡುವುದು.

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿರುವ ಮರಾಠಾ ಮಿಲ್ಟ್ರಿ ಯೋಜನೆಯಲ್ಲಿನ ಅರ್ಹತಾ ಮಾನದಂಡ ಸಹಾಯಧನ ಇತ್ಯಾದಿ ನಿಬಂಧನೆಗಳು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಅನುಸರಿಸುತ್ತಿರುವ ನಿಭಂದನೆಗಳು/ಮಾರ್ಗಸೂಚಿಗಳಿಗನುಸಾರ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳತಕ್ಕದ್ದು.

....2

19/11/22

2. **ಅರ್ಹತೆಗಳು:-**

- ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಫಲಾನುಭವಿಯು ಪ್ರವರ್ಗ 3-ಬಿ ಅಡಿಯಲ್ಲಿ 2(ಎ) ರಿಂದ 2(ಎಫ್) ವರೆಗೆ ಬರುವ ಮರಾಠ ಮತ್ತು ಇದರ ಉಪ ಜಾತಿಗೆ ಸೇರಿದವರಾಗಿರಬೇಕು.
- **ಆದಾಯ ಮಿತಿ**: ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದಲ್ಲಿ ರೂ.98.000/-ಮತ್ತು ನಗರ ಪ್ರದೇಶದವರಿಗೆ ರೂ.1,20,000/-ಗಳನ್ನು ಮೀರತಕ್ಕದ್ದಲ್ಲ.
- **ವಯೋಮಿತಿ**: ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳನ್ನು ಮೀರಿರತಕ್ಕದ್ದಲ್ಲ.
- **ವಿಳಾಸ**: ಅರ್ಜಿದಾರರು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರತಕ್ಕದು.
- **ವಿಶೇಷ ಚೇತನರ (ಅಂಗವಿಕಲರ) ಮೀಸಲಾತಿ:** ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಶೇ.5 ರಷ್ಟು ವಿಶೇಷ ಚೇತನ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಹಾಗೂ ವಿಧವೆಯರು, ವಿಚ್ಛೇದಿತ ಮಹಿಳೆಯರಿಗೆ ಹಾಗೂ ಪರಿತ್ಯಕ್ತ ಮಹಿಳೆಯರಿಗೆ ಮೊದಲ ಆದ್ಯತೆ ನೀಡತಕ್ಕದ್ದು.
- ಒಂದು ಕುಟುಂಬದಲ್ಲಿ ಒಬ್ಬ ಫಲಾನುಭವಿಗೆ ಮಾತ್ರ ಸಹಾಯಧನ ಪಡೆಯಲು ಅವಕಾಶವಿರುತ್ತದೆ.
- ಫಲಾನುಭವಿಗಳು ಕಡ್ಡಾಯವಾಗಿ ಆಧಾರ್ ಕಾರ್ಡ್ ಹೊಂದಿರಬೇಕು.
- ಅರ್ಜಿದಾರರು ಈ ಮೊದಲು ಸರ್ಕಾರದ/ನಿಗಮದ ಬೇರೆ ಯಾವುದಾದರು ಯೋಜನೆಗಳಲ್ಲಿ ಸಾಲ ಅಥವಾ ಇತರೆ ಆರ್ಥಿಕ ಸವಲತ್ತು ಪಡೆದಿರಬಾರದು.
- ಅರ್ಜಿ ಸಲ್ಲಿಸುವ ಫಲಾನುಭವಿಗಳು ಮಿಲ್ಟ್ರೀ ಹೋಟೆಲ್ ನಡೆಸಲು ಸಂಬಂಧಪಟ್ಟ ಪರವಾನಿಗೆ ಪತ್ರ ಮತ್ತು Food License FASSI Certificate ಹೊಂದಿರಬೇಕು.

3. **ಘಟಕ ವೆಚ್ಚ- ಸಾಲ ಹಾಗೂ ಸಹಾಯಧನ:-**

**ಸದರಿ ಯೋಜನೆಯನ್ನು ರೂ.5.00 ಲಕ್ಷಗಳ ಘಟಕ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.**

ಅರ್ಜಿದಾರರು ಉದ್ಯಮಕ್ಕಾಗಿ ಅವರು ಕೈಗೊಳ್ಳುವ ಆರ್ಥಿಕ ಚಟುವಟಿಕೆ ಮತ್ತು ಸಾಮರ್ಥ್ಯಕ್ಕನುಗುಣವಾಗಿ ರೂ.5.00 ಲಕ್ಷಗಳ ಘಟಕ ವೆಚ್ಚದಲ್ಲಿ ರೂ.40,000/-ಗಳ ಸಹಾಯಧನವನ್ನು ಫಲಾನುಭವಿಗಳು ತಮ್ಮ ಸ್ವಂತ ಹೆಸರಿನಲ್ಲಿ ಕನಿಷ್ಟ 20 ಅಡಿ X 30 ಅಡಿ ಅಳತೆಯುಳ್ಳ ನಿವೇಶನ ಹೊಂದಿದ್ದಲ್ಲಿ ನಿಗಮದಿಂದ ಒದಗಿಸುವುದು.

- **ಮರುಪಾವತಿ**:- ಬ್ಯಾಂಕ್‌ಗಳು ನಿಗಧಿಪಡಿಸುವ ಕಂತುಗಳನ್ವಯ ಸಾಲ ಮತ್ತು ಬಡ್ಡಿಯನ್ನು ಬ್ಯಾಂಕ್‌ಗಳಿಗೆ ಮರುಪಾವತಿ ಮಾಡತಕ್ಕದ್ದು.

4. **ಫಲಾನುಭವಿಗಳ ಆಯ್ಕೆ ಮತ್ತು ಯೋಜನೆಗಳ ಅನುಷ್ಠಾನ:-**

ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಈ ಕೆಳಕಂಡ ಆಯ್ಕೆ ಸಮಿತಿ ಮೂಲಕ ಈ ಯೋಜನೆಯ ಫಲಾನುಭವಿಗಳನ್ನು ಆಯ್ಕೆಮಾಡುವುದು:-

| ಕ್ರ. ಸಂ | ಅಧಿಕಾರಿಗಳು | ಪದನಾಮ |
|---|---|---|
| 1. | ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಅಧ್ಯಕ್ಷರು |

....3

19/11/22